# ಕರ್ನಾಟಕ ವಿಧಾನ ಪರಿಷತ್ತು

**150ನೇ ಅಧಿವೇಶನ-2023**

| ನಿಯಮ-330ರಡಿಯ ಸೂಚನೆ | |
|---|---|
| ಸೂಚನೆ ನೀಡಿದ ಸದಸ್ಯರ_ಹೆಸರು | ಡಾ: ವೈ.ಎ ನಾರಾಯಣಸ್ವಾಮಿ<br>ವಿಧಾನ ಪರಿಷತ್ತಿನ ಮಾನ್ಯ ಸದಸ್ಯರು |

## ಸೂಚನೆಯ ವಿಷಯ

ರಾಜ್ಯದಲ್ಲಿನ ಸರ್ಕಾರಿ ಪಾಲಿಟೆಕ್ನಿಕ್‌ಗಳಲ್ಲಿ ಮಂಜೂರು ಮಾಡಲಾಗಿರುವ ಹುದ್ದೆಗಳಿಗಿಂತ ಸುಮಾರು ಶೇ-35ರಷ್ಟು ಬೋಧಕ ವರ್ಗದವರ ಹುದ್ದೆಗಳು ಖಾಲಿ ಇದ್ದು, ತತ್ಪರಿಣಾಮವಾಗಿ ಹಾಲಿ ಕೆಲಸ ನಿರ್ವಹಿಸುತ್ತಿರುವ ಬೋಧಕರಿಗೆ ಕೆಲಸದ ಒತ್ತಡ ಹಾಗೂ ವರ್ಗಾವಣೆಯಲ್ಲಿನ ಪ್ರಕ್ರಿಯೆಯಲ್ಲಿ ಆಗುತ್ತಿರುವ ಲೋಪ ದೋಷಗಳ ಬಗ್ಗೆ.

## ಪ್ರಸ್ತಾಪಿತ ವಿಷಯಕ್ಕೆ ಸಂಬಂಧಿಸಿದಂತೆ ಮಾನ್ಯ ಉನ್ನತ ಶಿಕ್ಷಣ ಸಚಿವರ ಹೇಳಿಕೆ

ತಾಂತ್ರಿಕ ಶಿಕ್ಷಣ ಇಲಾಖೆಯ ಅಧೀನದಲ್ಲಿ ಬರುವ ಎಲ್ಲಾ ಸರ್ಕಾರಿ ಪಾಲಿಟೆಕ್ನಿಕ್‌ಗಳಲ್ಲಿ ಮಂಜೂರಾದ, ಭರ್ತಿಯಾದ ಮತ್ತು ಖಾಲಿ ಇರುವ ಬೋಧಕ ಹುದ್ದೆಗಳ ವಿವರ ಕೆಳಕಂಡಂತೆ ಇದೆ.

| ಕ್ರ. ಸಂ | ಹುದ್ದೆ | ಮಂಜೂರಾದ ಹುದ್ದೆಗಳು | ಭರ್ತಿಯಾದ ಹುದ್ದೆಗಳು | ಖಾಲಿ ಇರುವ ಹುದ್ದೆಗಳು |
|---|---|---|---|---|
| 1. | ಬೋಧಕ ಹುದ್ದೆಗಳು | 2731 | 1849 | 882 |

ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ಖಾಲಿ ಇರುವ ಬೋಧಕ ಹುದ್ದೆಗಳಿಗೆ ಎದುರಾಗಿ ಪ್ರಸ್ತುತ ಅರೆಕಾಲಿಕ ಉಪನ್ಯಾಸಕರನ್ನು ನೇಮಕ ಮಾಡಿಕೊಂಡು ಪಾಠ ಪ್ರವಚನ ನಡೆಸಲಾಗುತ್ತಿದೆ.

ತಾಂತ್ರಿಕ ಶಿಕ್ಷಣ ಇಲಾಖೆಯಲ್ಲಿ ಬೋಧಕರ ವರ್ಗಾವಣೆಗಳನ್ನು ನಿಯಂತ್ರಿಸುವ ಸಲುವಾಗಿ ಈ ಹಿಂದೆ ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳು (ತಾಂತ್ರಿಕ ಶಿಕ್ಷಣ ಇಲಾಖೆಯ ಸಿಬ್ಬಂದಿಯ ವರ್ಗಾವಣೆ ನಿಯಂತ್ರಣ) ಅಧಿನಿಯಮ, 2012 (2013ರ ಕರ್ನಾಟಕ ಅಧಿನಿಯಮ ಸಂಖ್ಯೆ:12) ಅನ್ನು ಅಧಿಸೂಚಿಸಲಾಗಿರುತ್ತದೆ ಹಾಗೂ ಸದರಿ ವರ್ಗಾವಣೆ ಅಧಿನಿಯಮದಡಿಯಲ್ಲಿ ಸರ್ಕಾರದ ಅಧಿಸೂಚನೆ ಸಂಖ್ಯೆ:ಸಂವ್ಯಶಾಇ 75 ಶಾಸನ 2012, ದಿನಾಂಕ:06.02.2013ರಂತೆ ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳು (ತಾಂತ್ರಿಕ ಶಿಕ್ಷಣ ಇಲಾಖೆಯ ಸಿಬ್ಬಂದಿಯ ವರ್ಗಾವಣೆ ನಿಯಂತ್ರಣ) ನಿಯಮಗಳು, 2013 ಅನ್ನು ರೂಪಿಸಲಾಗಿರುತ್ತದೆ.

2014ರ ವರ್ಗಾವಣೆ ನಿಯಮಗಳಲ್ಲಿನ ನ್ಯೂನತೆಗಳಿಂದಾಗಿ ಬೋಧಕರ ವರ್ಗಾವಣೆ ಪ್ರಕ್ರಿಯೆಯನ್ನು ಸಮರ್ಪಕವಾಗಿ ನಡೆಸಲು ಸದರಿ ನಿಯಮಗಳಿಗೆ ಅಗತ್ಯ ತಿದ್ದುಪಡಿ ಮಾಡಿದ್ದು, ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳು (ತಾಂತ್ರಿಕ ಶಿಕ್ಷಣ ಇಲಾಖೆಯ ಸಿಬ್ಬಂದಿಯ ವರ್ಗಾವಣೆ ನಿಯಂತ್ರಣ) ಅಧಿನಿಯಮ, 2012 ಅನ್ನು ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳು (ತಾಂತ್ರಿಕ ಶಿಕ್ಷಣ ಇಲಾಖೆಯ ಸಿಬ್ಬಂದಿಯ ವರ್ಗಾವಣೆ ನಿಯಂತ್ರಣ) (ನಿರಸನಗೊಳಿಸುವ) ಅಧ್ಯಾದೇಶ 2020ರಂತೆ ನಿರಸನಗೊಳಿಸಲಾಗಿದೆ.

ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ 137 ಡಿಟಿಇ 2020, ದಿನಾಂಕ:29.01.2021ರಲ್ಲಿ ತಾಂತ್ರಿಕ ಶಿಕ್ಷಣ ಬೋಧಕರ ವರ್ಗಾವಣೆಗಳನ್ನು ನಿಯಂತ್ರಿಸುವ ಸಲುವಾಗಿ ಹೊಸದಾಗಿ ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳು (ತಾಂತ್ರಿಕ ಶಿಕ್ಷಣ ಇಲಾಖೆಯ ಬೋಧಕ ಸಿಬ್ಬಂದಿಯ ವರ್ಗಾವಣೆ ನಿಯಂತ್ರಣ) ನಿಯಮಗಳು 2021 ಅನ್ನು ರೂಪಿಸಲಾಗಿರುತ್ತದೆ.

....2

ಈ ನಿಯಮಗಳನ್ವಯ, ತಾಂತ್ರಿಕ ಶಿಕ್ಷಣ ಇಲಾಖೆಯ ಅಧೀನದ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಬೋಧಕರುಗಳನ್ನು (ಪ್ರಾಧ್ಯಾಪಕರು, ಸಹ/ಸಹಾಯಕ ಪ್ರಾಧ್ಯಾಪಕರು(ಗ್ರೂಪ್-ಎ), ಸಹಾಯಕ ಪ್ರಾಧ್ಯಾಪಕರು (ಗ್ರೂಪ್-ಬಿ), ಗ್ರಂಥಪಾಲಕರು ಮತ್ತು ಕ್ರೀಡಾ & ದೈಹಿಕ ಶಿಕ್ಷಣ ನಿರ್ದೇಶಕರು), ಸರ್ಕಾರಿ ಪಾಲಿಟೆಕ್ನಿಕ್ ಸಂಸ್ಥೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಉಪನ್ಯಾಸಕರು ಮತ್ತು ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳ ಬೋಧಕರಗಳನ್ನು ವರ್ಗಾವಣೆ ನಿಯಮಗಳ ನಿಯಮ-4ರಲ್ಲಿ ತಿಳಿಸಿರುವಂತೆ, ನಿಗದಿತ ಸೇವಾವಧಿಯನ್ನು ಪೂರೈಸಿರುವವರನ್ನು ಮಂಜೂರಾದ ಬೋಧಕರ ಹುದ್ದೆಗಳ ಶೇಕಡಾ 9ರ ಮಿತಿಗೊಳಪಟ್ಟು ಸಾರ್ವಜನಿಕ ಹಿತಾಸಕ್ತಿಯ ವರ್ಗಾವಣೆಗಳಡಿ ಹಾಗೂ ಶೇಕಡಾ 6ರ ಮಿತಿಗೊಳಪಟ್ಟು ಕೋರಿಕೆ ಮೇರೆಗೆ ಹೀಗೆ ಒಟ್ಟು ಶೇಕಡಾ 15ರಷ್ಟು ಬೋಧಕರನ್ನು ನಿಯಮ-2ರ ಉಪನಿಯಮ (1) (e) ರನ್ವಯ ಗಣಕೀಕೃತ ಕೌನ್ಸೆಲಿಂಗ್ ಮುಖಾಂತರ ವರ್ಗಾವಣೆ ಮಾಡಲು ಅವಕಾಶ ಕಲ್ಪಿಸಲಾಗಿದೆ. ಅದರಂತೆ, ತಾಂತ್ರಿಕ ಶಿಕ್ಷಣ ಇಲಾಖೆಯ ಬೋಧಕರ ವರ್ಗಾವಣೆಯನ್ನು ಪಾರದರ್ಶಕವಾಗಿ ನಡೆಸಲಾಗುತ್ತಿದೆ.

**(ಸಂಖ್ಯೆ:ಇಡಿ 55 ಟಿಪಿಇ 2023)**

**(ಡಾ. ಎಂ.ಸಿ. ಸುಧಾಕರ್)**
ಉನ್ನತ ಶಿಕ್ಷಣ ಸಚಿವರು